ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರು, ವಾರ್ಡ್ ನಂ.114 ಅಗರಂ ವಾರ್ಡಿನ ದಿನಾಂಕ: 25-07-2022 ರಂದು ನಡೆದ ಸಭೆಯ ನಡವಳಿಗಳು**

ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಐ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 25-07-2022 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಗರಂ ವಾರ್ಡ್ ಸಂಖ್ಯೆ.114 ಸಭೆ ಬೆಂಗಳೂರು ಇಂಟರ್ ನ್ಯಾಷನಲ್ ಸೆಂಟರ್, ದೊಮ್ಮಲೂರು, ಬೆಂಗಳೂರು ರಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಮಾನ್ಯ ಶ್ರೀಮತಿ. ಸಾವಿತ್ರಿ, ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ.114 ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸಭೆಯು ದಿನಾಂಕ: 25-07-2022 ರಂದು ನಡೆಯಿತು.

**ಸಭೆಗೆ ಹಾಜರಿದ್ದವರ ವಿವರಗಳು**

1. ಶ್ರೀಮತಿ. ಸಾವಿತ್ರಿ, ನೋಡಲ್ ಅಧಿಕಾರಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಶಾಂತಿನಗರ ಉಪವಿಭಾಗ
2. ಶ್ರೀ. ವೀರೇಶ್ ಬಳಗನೂರು, ವಾರ್ಡ್ ಸಮಿತಿಯ ಕಾರ್ಯದರ್ಶಿ, ಸಹಾಯಕ ಅಭಿಯಂತರರು ಹಾಗೂ ಬಿ.ಬಿ.ಎಂ.ಪಿ ಇತರ ವಿಭಾಗಗಳ ಅಂದರೆ, ಅರಣ್ಯ, ಆರೋಗ್ಯ, ಕಾಮಗಾರಿ, ಘನತ್ಯಾಜ್ಯ ವಿಭಾಗ, ಅಧಿಕಾರಿಗಳು, ಬೆಸ್ಕಾಂ ಮತ್ತು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಹಾಜರಿದ್ದರು.
3. ವಾರ್ಡ್ ಸಮಿತಿ ಸದಸ್ಯರಾದ ಶ್ರೀಮತಿ. ರಾಧ, ಶ್ರೀಮತಿ. ಭವಾನಿ, ಶ್ರೀ. ನಂದ ಪಿ.ಕೆ, ಶ್ರೀಮತಿ. ವಸಂತ, ಶ್ರೀ. ಶರವಣ ಮತ್ತು ಶ್ರೀ. ರಾಜ್ ಕುಟ್ಟಿ ರವರು ಸಭೆಗೆ ಹಾಜರಿದ್ದರು.

ಸಭೆಯನ್ನು ಪ್ರಾರಂಭಿಸುತ್ತಾ, ಮೊದಲನೆಯದಾಗಿ ನೋಡಲ್ ಅಧಿಕಾರಿಯವರು ಸಭೆಗೆ ಅಧ್ಯಕ್ಷತೆಯನ್ನು ವಹಿಸಿದ್ದ ಮಾನ್ಯ ಶಾಸಕರು ಮತ್ತು ಹಾಜರಿದ್ದ ಅಧಿಕಾರಿಗಳನ್ನು ಮತ್ತು ಆಹ್ವಾನಿತರಾಗಿದ್ದ ಸ್ಥಳೀಯರು ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

**ವಾರ್ಡ್ ಸಮಿತಿ ಸಭೆಯಲ್ಲಿ ನೀಡಿರುವ ಈ ಕೆಳಕಂಡ ವಾರ್ಡಿನ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.**

1. ವಾರ್ಡ್ ಸಮಿತಿ ಸಭೆಯಲ್ಲಿ ವಾರ್ಡಿನ ನಾಗರೀಕರು ಕೇಂಬ್ರಿಡ್ಜ್ ರಸ್ತೆ 1ನೇ ಅಡ್ಡರಸ್ತೆ ಮತ್ತು 2ನೇ ಅಡ್ಡರಸ್ತೆಯಲ್ಲಿ ಮಳೆಯ ನೀರು ರಸ್ತೆಯಿಂದ ಮನೆಗಳಿಗೆ ನೀರು ನುಗ್ಗುತ್ತಿದ್ದು, ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುತ್ತದೆ. ಇದರ ಬಗ್ಗೆ ಕ್ರಮಕೈಗೊಳ್ಳಲು ಕೋರಿರುತ್ತಾರೆ ಹಾಗೂ ದೀನಬಂಧುನಗರ ಹಾಗೂ 6 ಅಡಿ ರಸ್ತೆಯಲ್ಲಿ ರಸ್ತೆಯು ತುಂಬಾ ಹಾಳಾಗಿದ್ದು, ಸದರಿ ರಸ್ತೆಗೆ ಕಾಂಕ್ರೀಟ್ ಅಳವಡಿಸಲು ಕೋರಿರುತ್ತಾರೆ. ಸಹಾಯಕ ಕಾರ್ಯಪಾಲಕ ಅಭಿಯಂತರರು, ದೊಮ್ಮಲೂರು ಉಪವಿಭಾಗ, ಬಿ.ಬಿ.ಎಂ.ಪಿ ರವರು ಈ ಬಗ್ಗೆ ಕ್ರಮವಹಿಸುವುದು.
2. ವಾರ್ಡ್ ಸಮಿತಿ ಸಭೆಯಲ್ಲಿ ವಾರ್ಡಿನ ನಾಗರೀಕರು ಅಗರಂ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವಂತಹ ಪೌರಕಾಮಿಕರು, ಆಟೋ ಚಾಲಕರು ಹಾಗೂ ಇತರೇ ಸ್ವಚ್ಛತಾ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ಮಾಸ್ಕ್, ಕೈಗವಚ ಹಾಗೂ ಅಗತ್ಯ ಸಲಕರಣೆಗಳನ್ನು ನೀಡಲು ಕ್ರಮಕೈಗೊಳ್ಳಲು ಕೋರಿರುತ್ತಾರೆ. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ-ಶಾಂತಿನಗರ, ಬಿ.ಬಿ.ಎಂ.ಪಿ ರವರು ಈ ಬಗ್ಗೆ ಕ್ರಮವಹಿಸುವುದು.
3. ವಾರ್ಡ್ ಸಮಿತಿ ಸಭೆಯಲ್ಲಿ ವಾರ್ಡಿನ ಸಾರ್ವಜನಿಕರು 2ನೇ 'ಎ' ಅಡ್ಡರಸ್ತೆ, ಕೇಂಬ್ರಿಡ್ಜ್ ರಸ್ತೆಯಲ್ಲಿ ಕುಡಿಯುವ ನೀರಿಗೆ ಮಣ್ಣು ಸೇರುತ್ತಿದ್ದು, ನೀರು ತುಂಬಾ ಕಲ್ಮಶಗೊಂಡಿರುತ್ತದೆ. ಇದರಿಂದ ಕುಡಿಯುವ ನೀರಿಗೆ ತೊಂದರೆಯಾಗುತ್ತಿರುವುದರ ಬಗ್ಗೆ ಕ್ರಮಕೈಗೊಳ್ಳಲು ಕೋರಿರುತ್ತಾರೆ. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಈ ಬಗ್ಗೆ ಕ್ರಮವಹಿಸುವುದು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯಗಳನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳ ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಪಟ್ಟ ಅಧಿಕಾರಿಗಳು ಕೈಗೊಂಡ ಕ್ರಮದ ವರದಿಯನ್ನು ನೀಡಲು ಸೂಚಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

26/7/22

ನೋಡಲ್ ಅಧಿಕಾರಿಗಳು
ವಾರ್ಡ್ ನಂ.114 ಅಗರಂ,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

<u>ಪ್ರತಿಯನ್ನು:</u>

1. ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಕಳುಹಿಸಿಕೊಡಲಾಗಿದೆ.
3. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
4. ಮಾನ್ಯ ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸಿದೆ.
5. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.